**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.265/2021**

ಪಿ.ಡಬ್ಲ್ಯೂಃ **6**

ಸಿ.ಡಬ್ಲ್ಯೂಃ 13

ಸಾಕ್ಷಿದಾರರ ಹೆಸರು ಃ ಬಸವರಾಜ್ ಜಿ. ಕೆ

ತಂದೆಯ ಹೆಸರು ಃ ಕೆ ಎಂ ಗಂಗಾಧರಯ್ಯ

ವಯಸ್ಸು ಃ 43 ವರ್ಷ

ಉದ್ಯೋಗ ಃ ಪಿ ಎಸ್ ಐ

ವಾಸಸ್ಥಳ ಃ ಕೊಪ್ಪ

ಸಾಕ್ಷಿದಾರರು ವಿಡೀಯೋ ಕಾನ್ಫರೆನ್ಸ್ ಮುಖಾಂತರ ನ್ಯಾಯಾಲಯದ ಮುಂದೆ ಹಾಜರಾಗಿರುತ್ತಾರೆ.

**ದಿನಾಂಕಃ 20-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

ನಾನು ನವೆಂಬರ್ **2021** ರಿಂದ ಡಿಸೆಂಬರ್ **2022** ರವರೆಗೆ ಅಜ್ಜಂಪುರ **ಪೊಲೀಸ್ ಠಾಣೆಯಲ್ಲಿ** ಪಿ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ 24-05-2020 ರಂದು ಲಕ್ಕವಳ್ಳಿ ಠಾಣಾ ಮೊಕದ್ದಮೆ ಸಂಖ್ಯೆ 33/2020 ರಲ್ಲಿ ಕಲಂ 379 ಐಪಿಸಿ ಮತ್ತು ಕಲಂ 4(1), 21, 22 ಎಂ ಎಂ ಆರ್ ಡಿ ಆಕ್ಟ ಅಡಿಯಲ್ಲಿ ಆರೋಪಿತನಾದ ಹರೀಶ್ ನಾಯ್ಕ ರವರು ಲಕ್ಕವಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಭದ್ರಾ ಹೊಳೆ ಪಕ್ಕದಲ್ಲಿರುವ ಸಂತೋಷನಾಯ್ಕರವರ ಜಮೀನಿನ ಪಕ್ಕದಲ್ಲಿ ಅಕ್ರಮವಾಗಿ ಮರಳನ್ನು ತೆಗೆದಿರುತ್ತಾರೆಂದು ಪ್ರಕರಣ ದಾಖಲಾಗಿದ್ದು, ಈ ಪ್ರಕರಣದ ಆರೋಪಿತರಾದ ಹರೀಶ್ ನಾಯ್ಕರವರು ಸ್ಥಳದಲ್ಲಿ ಹಾಜರಿದ್ದು, ಸ್ಥಳಕ್ಕೆ ಚಾಸಾ-4 ಮತ್ತು 5 ರವರನ್ನು ಬರಮಾಡಿಕೊಂಡು ಪ್ರಕರಣದ ಸಾರಾಂಶವನ್ನು ತಿಳಿಸಿ, ಸ್ಥಳದಲ್ಲಿ ಹಾಜರಿದ್ದ ಹರೀಶ್ ನಾಯ್ಕರವರು ತೋರಿಸಿದ ಮೇರೆಗೆ ಮಹಜರ್ ಕ್ರಮವನ್ನು ಜರುಗಿಸಲು ಪಂಚರಿಗೆ ತಿಳಿಸಿದ್ದು , ಅವರ ಒಪ್ಪಿಗೆ ಮೇರೆಗೆ ಅವರಿಗೆ ನೋಟೀಸ್ ಜಾರಿ ಮಾಡಿ 1-00 ರಿಂದ 2-00 ಗಂಟೆಯವರೆಗೆ ಮಹಜರ್ ಕ್ರಮವನ್ನು ಜರುಗಿಸಿರುತ್ತೇನೆ. ನಂತರ ಛಾಯಚಿತ್ರವನ್ನು ತೆಗೆಸಿರುತ್ತೇನೆ. ಆರೋಪಿಯು ಟಾಟಾ ಎಸಿ ಪಿಕಪ್ ವಾಹನ ಕೆಎ 18 ಸಿ 4311 ವಾಹನದಲ್ಲಿ ಮರಳನ್ನು ಸಾಗಿಸಿರುವುದು ಎಂದು ತಿಳಿಸಿದ್ದು, ನಂತರ ಸದರಿ ವಾಹನವು ಠಾಣೆಯ ಆವರಣದಲ್ಲಿ

ಇರುತ್ತದೆ. ನಂತರ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-14 ರವರಿಗೆ ನೀಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು ಸದರಿ ದಾಖಲೆಯನ್ನು ಈಗಾಗಲೇ ನಿಪಿ-10 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-10(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-11 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಆರೋಪಿತರ ಪರ** ಶ್ರೀ ಕೆಪಿ **ವಕೀಲರಿಂದ.**

ಆರೋಪಿಯು ಯಾವುದೇ ಮರಳನ್ನು ಸಾಗಾಟ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಚಾಸಾ-4 ಮತ್ತು 5 ರವರನ್ನು ಈ ಪ್ರಕರಣಕ್ಕೋಸ್ಕರ ಸೃಷ್ಠಿ ಮಾಡಿರುತ್ತಿರಾ ಎಂದರೆ ಸರಿಯಲ್ಲ. ಅವರಿಗೆ ಯಾವುದೇ ನೋಟೀಸ್ ನ್ನುಜಾರಿ ಮಾಡಿಲ್ಲ ಎಂದರೆ ಸರಿಯಲ್ಲ. ನೀವು ಯಾವುದೇ ಮಹಜರ್ ಕ್ರಮವನ್ನು ಜರುಗಿಸಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆರೋಪಿಯ ಮೇಲೆ ಸುಳ್ಳು ಪ್ರಕರಣ ದಾಖಲು ಮಾಡಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

**ಮರುವಿಚಾರಣೆ:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**